ಮೈಸೂರ ಗೆಜೆಟ್.

ನಂ. 30 ಸರ್ಕಾರದಿಂದ ಪ್ರಕಟಿಸಲ್ಪಟ್ಟದ್ದು. ಸನ್ 1887.

ಬೆಂಗಳೂರು, ಶನಿವಾರ, ಜುಲೈ ತಾ|| 30, ಸನ್ 1887.

ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

ವಿಷಯ ಸೂಚಿಕೆ.

1ನೇ ಭಾಗ—ಮೈಸೂರು ಮಹಾರಾಜ ರಾಜಾಸಾಹೆಬ್ ಬಹದೂರವರ ದಿವಾನರವರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

2ನೇ ಭಾಗ—ರೆಸಿಡೆಂಟರು, ಚೀಫ್ ಜಡ್ಜ್‌ರಯವರು, ಸರ್ವೆ ವ ಇನಾಂ ಸೂಪರ್‌ಟೆಂಡೆಂಟರು, ಕಾಂಪ್ಟ್ರೋಲರವರು, ಪಬ್ಲಿಕ್ ವರ್ಕ್ಸ್ ಆಫೀಸರ್‌ಗಳು, ಫಾರೆಸ್ಟ್ರು ಇನ್‌ಸ್ಪೆಕ್ಟರ್ ಜನರಲ್‌ಯವರು, ರಿಜಿಸ್ಟ್ರೇರ್ ಇನ್‌ಸ್ಪೆಕ್ಟರ್ ಜನರಲ್ಲವರು, ಅಂಚೆ ಬಕ್ಷೀರು, ಮ್ಯುನಿಸಿಪಲ್ ಬೋರ್ಡು ಪ್ರಸಿಡೆಂಟರು, ಡಿಸ್ಟ್ರಿಕ್ಟು ವ ಸೆಷನ್ ಜಡ್ಜ್‌ರು, ಡಿ|| ಡೆಪ್ಯೂಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜ್‌ರು, ಪೊಲೀಸ್ ಸೂಪರ್‌ಟೆಂಡೆಂಟರು, ಫಾರೆಸ್ಟ್ರು ಆಫೀಸರ್‌ಗಳು, ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ; ಕಾಲಸ್ಥಿತಿ ರಿಪೋರ್ಟುಗಳು ; ಪೋಸ್ಟ್ಮಾಫೀಸ್ ನೋಟೀಸ್‌ಗಳು.

3ನೇ ಭಾಗ—ಶ್ರೀಮ್ ಮಹಾರಾಜ ರಾಜಾಸಾಹೆಬ್ ಬಹದೂರವರಿಂದ ಮಂಜೂರ್ಮಾಡಲ್ಪಟ್ಟ ಆಕ್ಟುಗಳು ವ ರೆಗ್ಯುಲೇಷನ್‌ಗಳು, ಇಲ್ಲ.

4ನೇ ಭಾಗ—ಸರ್ಕಾರೀ ಕಾಗದ ಪತ್ರಗಳು—ಇಲ್ಲ.

೧ನೇ ಭಾಗ.

ಶ್ರೀಮನ್ಮಹಾರಾಜ ರಾಜಾಸಾಹೆಬ್ ಬಹದೂರವರ ದಿವಾನರವರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಜನರಲ್.

ಇಸ್ತಿಹಾರ್‌ನಾಮೆಗಳು.

ತಾರೀಖು 14ನೇ ಜುಲೈ 1887.

ನಂ. 57.—1879ನೇ ಇಸವಿ 1ನೇ ನಂಬರ್ ಸ್ಟ್ಯಾಂಪು ಆಕ್ಟಿನ 9ನೇ ಸೆಕ್ಷನ್ ಅನುಸರಿಸಿ, ಮೈಸೂರ ಶ್ರೀಮ್ ಮಹಾರಾಜಾ ಸರ್ಕಾರದವರು ಯಿದರ ದೆಸೆಯಿಂದ ಆಜ್ಞಾಪಿಸುವದೇನಂದರೆ ಸದರೀ ಆಕ್ಟಿನ 10ನೇ ಸೆಕ್ಷನ್ (a) ಕ್ಲಾಜ್ ಅನುಸರಿಸಿ ನೋಟೋರಿಯಲ್ ಆಕ್ಟ್ ಯಾನೆ ಕೆಲಸಗಳಿಗಾಗಿ ಸ್ಟ್ಯಾಂಪು ತೀರ್ವೆ ವಸೂಲೀ ಬಗ್ಗೆ "ನೋಟೋರಿಯಲ್" ಯಂಬದಾಗಿ ಮೇಲೆ ಛಾಪಿಸಲ್ಪಟ್ಟಂಥಾ ಒಂದು ರೂಪಾಯಿ ಕ್ರಯವುಳ್ಳ ಕೋರ್ಟುಫೀ ಲೇಬಿಲ್ಲುಗಳು ಉಪಯೋಗಿಸಲ್ಪಡತಕ್ಕದ್ದು.

ತಾರೀಖು 18ನೇ ಜುಲೈ, 1887.

ನಂ. 58.—ತುಮಕೂರ ಡಿಸ್ಟ್ರಿಕ್ಟ್ ಡೆಪ್ಯುಟಿ ಕಮ್ಮಿಷನರ್ ಮೆ|| ಪಿ. ಯ್. ಕೃಷ್ಣಮೂರ್ತಿ ಬಿ. ಯಲ್. ಯವರು, ಅವರಿಗೆ 1887ನೇ ಇಸವಿ ಮೇ 17ನೇ ಮುಕ್ತಂ 507ನೇ ನಂಬರ್ ಅಪ್ತಿ ಹಾರ್ನಾಪಿಯಿಂದ ಕೊಡಲ್ಪಟ್ಟ ರಜಾಕ್ಕೆ ಜಾಸ್ತಿಯಾಗಿ ಮೂರು ವಾರ ಗಳ ಪ್ರಿವಿಲೀಜ್ ರಜಾ ಕೊಡಲ್ಪಟ್ಟಿರುತ್ತಾರೆ.

ತಾರೀಖು 20ನೇ ಜುಲೈ 1887.

ನಂ. 59.—ಮೆ|| ತಿರುಮಲಾಚಾರ್ಯರವರು ಶಿವಮೊಗ್ಗಾ ಡಿಸ್ಟ್ರಿಕ್ಟ್ ಫಸ್ಟ್ ಅ|| ಕಮ್ಮಿಷನರ್ ಆಫೀಸ್ ಚಾರ್ಜನ್ನು 1887ನೇ ಇಸವಿ ಜೂನ್ 29ನೇ ಮುಕ್ತುಮಿನ ಪೂರ್ವಾನ್ಹದಲ್ಲಿ ಮೆ|| ಜೆ. ಡಬ್ಲಿಯು. ಸ್ಮೈಟ್ ಯವರಿಗೆ ಒಪ್ಪಿಸಿ ಯಿರುತ್ತಾರೆ.

ತಾರೀಖು 12ನೇ ಜುಲೈ 1887.

ನಂ. 55.—ಸಕಲ ಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡೀ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡೀದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕೀ ಸಮಾಧಾನಕ್ಕೋಸ್ಕರ ಕ್ರಮ ಪ್ರಕಾರ ಜಪ್ತಿ ಮಾಡಲ್ಪ ಟ್ಟಿರುವ ಈ ಕೆಳಗೆ ಕಂಡ ಜೋಡಿ ಗ್ರಾಮಗಳು ಇದರಡೀ ಕಂಡ ತಖ್ತೆಯಲ್ಲಿ ನಮೂದಿರುವ ಸ್ಥಳಗಳಲ್ಲೂ ವ ತಾರೀಖುಗಳಲ್ಲೂ ಬಹಿರಂ ಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಗೆ 11 ಘಂಟೆಗೆ ಹರಾಜು ಷುರುವಾಗಿ ಉಳಿಕೆ ಯಾ ವದೂ ಇಲ್ಲದೆ ಗ್ರಾಮಗಳು ಚಡದರಖಾಸ್ತುದಾರನಿಗೆ ಹರಾಜ್ ನಿಲ್ಲುವದು.

2. ಪರಂತು, ಒಂದು ಗ್ರಾಮವನ್ನು ಬೇರೆಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯುಟಿ ಕಮ್ಮಿಷ ನರವರು ತಮ್ಮ ಯಖ್ತ್ಯಾರೀ ಮೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಒಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜು ಹಾಕಿಸುವರು.

3. ಕ್ರಯದಾರನು ಹರಾಜ್ ಕಾಲದಲ್ಲಿ ಕ್ರಯದ ಮೊಬಲಗ್ ಪೈಕೀ ಕೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗ್ ಪೈಕೀ ಬಾಕೀಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತೀ ಮಾಡದೇ ಇದ್ದರೆ, ಡಿಪಾ ಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೇ ಹೋದರೆ, ಅಥವಾ ಬಾಕೀ ಕ್ರಯದ ಮೊಬಲಗನ್ನು ಪಾವತೀ ಮಾಡದಿದ್ದರೆ ಜವಿಾನುಗಳು ಅವ್ವೆಲ್ ಕ್ರಯದಾರನ ಖರ್ಚಿನಲ್ಲಿ ವ ನುಕ್ಸಾನಾಗಿ ಮರೆ ಹರಾಜು ಹಾಕಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರೀಕ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕ್ರರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ಯಸ್ಥರಿಂದ ರುಜೂ ಮಾಡ ಲ್ಪಟ್ಟ ಬರವಣಿಗೇ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸ ಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕು ಇಟೆಂಬ ಇತರ ಯಾವ ಮನುಷ್ಯನಾಗಲಿ, ಬಡ್ಡೀ ದಾ ಇತರ ಖರ್ಚುಗಳು ವೇಖೀಲ್ ಕಂದಾಯದ ಬಾಕೀ ಮೊಬಲಗನ್ನು ಪೂರಾ ಹಾಜರ್ ಮಾಡಿದರೆ, ಹರಾಜು ಮುನ್ಸೂಕೂಫ್ ಮಾಡಲ್ಪಡತಕ್ಕದ್ದು. ಪರಂತು ಹರಾಜಿಗೆ ಗೊತ್ತಾದ ದಿನಕ್ಕೆ ಹಿಂದಿನ ದಿನದ ಸೂರ್ಯಾಸ್ತವು ಯಕ್ಕೆ ಮುಂಚಿತವಾಗಿ ಸದರೀ ಹಣ ಹಾಜರ್ ಮಾಡತಕ್ಕದ್ದು.

7. ದಿವಾನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜು ಕಾಯಮ್ಮಾದ್ದಾಗಿರುವದಿಲ್ಲವು.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತೀ ಮಾಡಿ, ಹರಾಜನ್ನ ದಿವಾನರವರು ಖಾಯಂ ಮಾಡಿದ ಕೂಡ್ಲೆ ಗ್ರಾಮವು ಆತನ ಸುಪರ್ದು ಮಾಡಲ್ಪಟ್ಟು, ಕ್ರಯದಾರನ ಜೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಡೆಪ್ಯುಟಿ ಕಮ್ಮಿಷನರವರಿಂದ ರುಜೂ ಮೊಹರ್ ಮಾಡೋಣಾದ ಒಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಸೀಲ್‌ನಲ್ಲಾಗಲಿ ಅಂದಾಜು ಬೀಜವರೀ ವಿಷಯದ ಲ್ಲಾಗಲಿ ಇರುವ ಗಲ್ಲತಿಗಳಿಗೆ ಸರ್ಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನುಕ್ಸಾನ ಪಟ್ಟಂತೆ ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 30 ದಿನಗಳೊಳ ಗಾಗಿ ದಿವಾನರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂತಾ ಅಪ್ಪೀಲ್‌ನಲ್ಲಿ ಆಗುವ ಆರ್ಡೆರ್ ಹುಕ್ಕುಮಿಗೆ ಸದರೀ ಕ್ರಯ ವು ಒಳಪಟ್ಟಿರುತ್ತೆ.

ಡಿಸ್ಟ್ರಿಕ್ಟು.	ತಾಲ್ಲೂಕು.	ಹೋಬಳಿ.	ಗ್ರಾಮದ ಹೆಸರು.	ಜೋಡೀದಾರರ ಹೆಸರು.	ಅಂದಾಜು ಬೀಜವರೀ.	ಅಂದಾಜು ಹುಟ್ಟುವಳೀ ಯಾ ಬೇರೀಜು.	ಸಾಲಿಯಾನಾ ಸರ್ಕಾರಕ್ಕೆ ಕೊಡಬೇಕಾದ ಕ್ವಿಟ್‌ರೆಂಟ್.	ಯಾವ ಬಾಕೀಗೋಸ್ಕರ ರಗ್ಯಾವುಗಳು ಹರಾಜು ಮಾಡಲ್ಪಡುತ್ತೋ ಅಂಥಾ ಸರಕಾರದ ಕಂದಾಯದ ಬಾಕೀ.	ಹರಾಜು ತಾರೀಖು ವಗೈರೆ.
					ಖಂ. ಕೂ. ಪ.	ರೂ. ಆ. ಪೈ.	ರೂ. ಆ. ಪೈ.	ರೂ. ಆ. ಪೈ.	
ಕೋಲಾರ.	ಕೋಲಾರ	ಕೋಲಾರ	ಬೆಟ್ಟದಹೊಸಹಳ್ಳಿ	ಕೇಷವ್ಮ್ಮ ವಗೈರೆ	28 13 15½	45 0 0	44 12 10	197 5 11 ಮತ್ತು ಬಡ್ಡೀ	ತಾಲ್ಲೂಕು ಕಛೇರಿಯಲ್ಲಿ ಅಮಲ್‌ದಾರ್ರ ರೂಬರೂ ಆಗಸ್ಟ್ ತಾರೀಖು 18ರಲ್ಲು.
	ಬಂಗಾರಪೇಟೆ	ಗಂಜಿಗುಂಟೆ	ನಾಗಿರಡ್ಡಿಹಳ್ಳಿ	ಕೆ. ವಾಸುದೇವಾಚಾರಿ ವಗೈರೆ	ಯೆ. ಸೆಂ. 25 0	125 15 5	38 3 4	547 3 5 ಮತ್ತು ಬಡ್ಡೀ	ಡಿಟೋ
ತುಮಕೂರ.	ಶಿರಾ	ತುಮಕುಂದ	ಅಗ್ರಹಾರ ಮುಚಡಿ	ಕಲ್ಲಾಭಟ್ಟಾ ಇತರ 16 ಮಂದಿ	381 34	1,333 0 0	1,201 0 0	1,253 9 8 ಮತ್ತು ಬಡ್ಡೀ	ಡಿಟೋ ಡಿಟೋ ತಾರೀಖು 31ರಲ್ಲು.
			ಮುಟ್ಟಹಳ್ಳಿ	ಡಿಟೋ	176 52	680 0 0	595 0 0	618 15 0 ಮತ್ತು ಬಡ್ಡೀ	ಡಿಟೋ
ಹಾಸನ.	ಚೆಲೂರು	ಬಿನಾರಸಂತಿ	ಮೆಣಸು ಮಾವಿ	ನರಶಿಕ್ಯಭಟ್ಟಾ ಇತರ 5 ಮಂದಿ	ಯೆ. ಗುಂ. 196 38	204 8 0	39 0 0	201 9 11 ಮತ್ತು ಬಡ್ಡೀ	ಡಿಟೋ ಡಿಟೋ ತಾರೀಖು 18ರಲ್ಲು.

ತಾರೀಖು 23ನೇ ಜುಲೈ 1887.

ನಂ. 60.—ಸಕಲಜನಗಳಿಗೂ ತಿಳಿಯುವ ಬಗ್ಯೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡೀ ಕಂಡ ತಖ್ತೀಯಲ್ಲಿ ನಮೂದಿಸಿದ ಪ್ರಕಾರ) ಜೋಡೀದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕೀ ಸಮಾಧಾನಕ್ಕೋಸ್ಕರ ಕ್ರಮ ಪ್ರಕಾರ ಜಪ್ತೀಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡಿ ಗ್ರಾಮವು ಇದರಡೀಕಂಡ ತಖ್ತೀಯಲ್ಲಿ ನಮೂದಿರುವ ಸ್ಥಳದಲ್ಲೂ ವ ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು. ಮತ್ತು ಸದರೀ ತಾರೀಖಿನಲ್ಲಿ ಬೆಳ್ಗ್ಯೆ 11 ಘಂಟೆಗೆ ಹರಾಜು ಪುರುವಾಗಿ ಉಳಿಕೆ ಯಾವದೂ ಇಲ್ಲದೆ ಗ್ರಾಮವು ಚಡ ದರಖಾಸ್ತುದಾರನಿಗೆ ಹರಾಜು ನಿಲ್ಲುವದು.

2. ಪರಂತು, ಬಂದು ಗ್ರಾಮವು ಬೇರೆಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಸಬ್ ಡಿವೀಜ್ಯನ್ ಆಫೀಸರವರು ತಮ್ಮ ಯಖ್ತ್ಯಾರೀ ಮೇಲೆ ಪೂರಾ ಗ್ರಾಮವನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಬಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜ್ ಹಾಕಿಸುವರು.

3. ಕ್ರಯದಾರನು ಹರಾಜ್ ಕಾಲದಲ್ಲಿ ಕ್ರಯದ ಮೊಬಲಗ ಪೈಕೀ ಕೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ, ಕ್ರಯದ ಮೊಬಲಗ ಪೈಕೀ ಬಾಕೀಯನ್ನು ಹರಾಜು ತಾರೀಖು ಲಾಗಾಯತು 15 ದಿನಗಳೊಳಗಾಗಿ ಪಾವತೀ ಮಾಡದೇ ಇದ್ದರೆ, ಡಿಪಾಜಿಟ್ ಮೊಬಲಗು ದಂಡವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೇ ಹೋದರೆ, ಅಥವಾ ಬಾಕೀ ಕ್ರಯದ ಮೊಬಲಗನ್ನು ಪಾವತೀ ಮಾಡದಿದ್ದರೆ ಜಮೀನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ವ ನುಕ್ಸಾನಾಗಿ ಮರಳಿ ಹರಾಜು ಹಾಕಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ ಯಾ ಮುತಾಲೀಕರ ತರೀಕ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ ತಮ್ಮ ಮುಖ್ಯಸ್ಥರಿಂದ ರುಜು ಮಾಡಲ್ಪಟ್ಟ

ಬರವಣಿಗೇ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗ್ಗೆದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಬಡ್ಡೀ ಯಾ ಇತರ ಖರ್ಚುಗಳು ದೇವೀಲ್ ಕಂದಾಯದ ಬಾಕೀ ಮೊಬಲಗನ್ನು ಪೂರಾ ಹಾಜರ್ ಮಾಡಿದರೆ, ಹರಾಜು ಮುವ್ಕೂಫ್ ಮಾಡಲ್ಪಡತಕ್ಕದ್ದು. ಪರಂತು ಹರಾಜಿಗೆ ಠೊತ್ತಾದ ದಿನಕ್ಕೆ ಹಿಂದಿನ ದಿನದ ಸೂರ್ಯಾಸ್ತಮಯಕ್ಕೆ ಮುಂಚಿತವಾಗಿ ಸದರೀ ಹಣ ಹಾಜರ್ ಮಾಡತಕ್ಕದ್ದು.

7. ದಿವಾನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜು ಕಾಯಮ್ಮಾದ್ದಾಗಿರುವದಿಲ್ಲವು.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತೀ ಮಾಡಿ, ಹರಾಜನ್ನು ದಿವಾನರವರು ಖಾಯಂ ಮಾಡಿದ ಕೂಡ್ಲೆ ಗ್ರಾಮವು ಆತನ ಸುಫರ್ದು ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಸಬ್ ಡಿವೀಜ್ಞ ಆಫೀಸರವರಿಂದ ರುಜೂ ಮೊಹರ್ ಮಾಡೋಣಾದ ಬಂದು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಸೀಲ್ನಲ್ಲಾಗಲಿ ಅಂದಾಜಾ ಬೀಜವರಿ ವಿಷಯದಲ್ಲಾಗಲಿ ಇರುವ ಗಲ್ಲತ್‌ಗಳಿಗೆ ಸರ್ಕಾರದವರು ಜವಾಬ್‌ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನುಕ್ಸಾ ಪಟ್ಟಂತೆ ಎಣಿಸುವ ಜನಗಳು ಜವಾಜ್ ತಾರೀಖು ಲಾಗಾಯತು 30 ದಿನಗಳೊಳಗಾಗಿ ದಿವ್ಹಾರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲಿನಲ್ಲಿ ಆಗುವ ಆಖೈರ್ ಹುಕ್ಕುಮಿಗೆ ಸದರೀ ಕ್ರಯವು ಒಳಪಟ್ಟು ಯಿರುತ್ತೆ.

ತಿಪ್ಪಟ್ಟೂರು. ತಾಲ್ಲೂಕು. ಹೋಬಳಿ.	ಗ್ರಾಮ.	ಜೋಡಿದಾರರ ಹೆಸರು.	ಅಂದಾಜಾ ಬೀಜವರೀ.	ಅಂದಾಜಾ ಹುರಕಾರಕ್ಕೆ ಕೊಟ್ಟುವಳ್ಳೇ ಯಾಜಬೇಕಾದ ಕ್ವಿಬೇರೀಜು.	ಸಾಲಿಯಾನಾ ಸರಕಾರದ ಕೊಡುತ್ತೇ ಟೆರೆಂಟ್.	ಯಾವಬಾಕೀಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಡುತ್ತೋ ಅಂಥಾ ಸರಕಾರದ ಕಂದಾಯದ ಬಾಕೀ.	ಹರಾಜು ತಾರೀಖು ವಗೈರೆ.
ಮೈಸೂರು. ಅಗ್ರಹಾರ. ನಂಜಿಬಾಹಳ್ಳಿ.	ದೊಡ್ಡಸೋಮನಹಳ್ಳಿ.	ತಿಮ್ಮಯ್ಯ ವಗೈರೆ.	ಎ. ಗುಂ. ಗ. 349 17 0	ರೂ. ಆ. ಪೈ. 221 0 7	ರೂ. ಆ. ಪೈ. 223 14 9	ರೂ. ಆ. ಪೈ. 83 13 10	ಸ್ಯ 1887ನೇ ಇಸವಿ ಆಗಸ್ಟ್ ತಾರೀಖು 31ರಲ್ಲು ತಾಲ್ಲೂಕು ಕಛೇರಿಯಲ್ಲಿ ಅಮಲ್ದಾರ್ರ ರೂಬರು.

ಹುಕ್ಕುಂ ಬಮೋಜೀಬ್,

ಆರ್. ವಿಜಯೀಂದ್ರರಾವ್,

ಜೀಫ್ ಸೆಕ್ರೆಟೇರಿ.